ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ಬೀದರ್ ಜಿಲ್ಲೆಯಲ್ಲಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಬಗ್ಗೆ

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

91 (43) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯಲ್ಲಿರುವ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು) 10 ಮಕ್ಕಳಿಗಿಂತ ಕಡಿಮೆ ದಾಖಲಾತಿ ಇರುವ ಶಾಲೆಗಳು ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು) ದಾಖಲಾತಿ ಹೆಚ್ಚಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಶಿಕ್ಷಕರ ಕೊರತೆಯಿಂದಾಗಿ ಎಸ್.ಎಸ್.ಎಲ್.ಸಿ ಫಲಿತಾಂಶವು ಕಡಿಮೆ ಪ್ರಮಾಣದಲ್ಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)